ಅ) ತುರುವೇಕೆರೆ ಪಟ್ಟಣವು ಕೆ.ಯು.ಐ.ಡಿ.ಎಫ್.ಸಿ.ಯು ಅನುಷ್ಠಾನ ಕೆ.ಯು.ಐ.ಡಿ.ಎಫ್.ಸಿ. ಯಿಂದ ಗೊಳಿಸುತ್ತಿರುವ ಯಾವುದೇ ಯೋಜನೆಗಳಲ್ಲಿ ಸೇರ್ಪಡೆಯಾಗಿರುವುದಿಲ್ಲ. ಅದುದರಿಂದ ಹಣ ಬಿಡುಗಡೆ ಪ್ರಶ್ನೆ ಉದ್ಭವಿಸುವುದಿಲ್ಲ.

3562 (4532) ಶ್ರೀ ಎಂ.ಟಿ.ಕೃಷ್ಣಪ್ಪ (ತುರುವೇಕೆರೆ) – ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರುಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಪಟ್ಟಣದಲ್ಲಿ ಬಸ್ ಸ್ಟ್ಯಾಂಡ್ ತೆರೆಯಲು ಸರ್ಕಾರಕ್ಕೆಗೊಂಡಿರುವ ಕ್ರಮವೇನು ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)–

ಅ) ಬಸ್ ನಿಲ್ದಾಣ ಸ್ಥಾಪಿಸಲು ಸೂಕ್ತ ಜಮೀನನ್ನು ಪಡೆಯುವ ಕ್ರಮ ಪ್ರಗತಿಯಲ್ಲಿರುತ್ತದೆ.

3563 (4532) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ) – ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2005–06 ನೇ ಸಾಲಿನ ವರ್ಗಾವಣೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಮೈಸೂರು ಮಿನರಲ್ಸ್‌ನಲ್ಲಿ ವರ್ಗಾವಣೆ ಮಾಡುವಾಗ ಕಾನೂನು ಉಲ್ಲಂಘನೆಯಾಗಿದ್ದು, ಉಲ್ಲಂಘನೆಯಾದ ಬಗ್ಗೆ ಕೈಗೊಂಡಿರುವ ಕ್ರಮವೇನು ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು) –

ಅ) 2005–06 ನೇ ಸಾಲಿನ ವರ್ಗಾವಣೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಮೈಸೂರು ಮಿನರಲ್ಸ್ ಲಿಮಿಟೆಡ್ ಸಂಸ್ಥೆಯಲ್ಲಿ ಯಾವುದೇ ಕಾನೂನು ಉಲ್ಲಂಘನೆ ಆಗಿರುವುದಿಲ್ಲ.

3564 (4035) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ) – ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಹೇಮಾವತಿ ಯೋಜನೆಗೆ ಸರ್ಕಾರ ಮಂಜೂರು ಮಾಡುವ ಹಣವೆಷ್ಟು ; ಬೇರೆ ಬೇರೆ ಜಿಲ್ಲೆಗೆ ಹೋಲಿಸಿದಾಗ